ದಿನಾಂಕ: **12.07.2023** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ನಾನು ನ್ಯಾಯಾಲಯದ ಆದೇಶದ ಮೇರೆಗೆ ಪೊಲೀಸ್ ಠಾಣೆಯಲ್ಲಿ ಪೊಲೀಸರಿಂದ ಸರವನ್ನು ವಾಪಸ್ಸು ಪಡೆದುಕೊಂಡಿರುತ್ತೇನೆ. ಸಾಕ್ಷಿಯು ಸದರಿ ಸರದ ಬಾವಚಿತ್ರವನ್ನು ನೋಡಿ ಗುರುತಿಸಿದ್ದು ಸದರಿ ಬಾವಚಿತ್ರವನ್ನು ನಿಪಿ.4 ಎಂದು ಗುರುತಿಸಲಾಯಿತು. ಆರೋಪಿತರನ್ನು ಗುರುತಿಸಲು ನನಗೆ ತಾಲ್ಲೂಕು ದಂಡಾಧಿಕಾರಿಯವರು ತಿಳುವಳಿಕೆ ಪತ್ರವನ್ನು ನೀಡಿರುತ್ತಾರೆ. ಅದರಂತೆ ನಾನು ಚಿಕ್ಕಮಗಳೂರು ಕೇಂದ್ರ ಕಾರಾಗೃಹಕ್ಕೆ ಹೋಗಿ ಆರೋಪಿತರನ್ನು ನೋಡಿ ಗುರುತಿಸಿರುತ್ತೇನೆ. ಆರೋಪಿತರನ್ನು ತೋರಿಸಿ ನೀವು ಕೇಂದ್ರ ಕಾರಾಗೃಹದಲ್ಲಿ ನೋಡಿದ ಆರೋಪಿಗಳು ಇವರೇನಾ ಎಂದು ಕೇಳಿದಾಗ ಸಾಕ್ಷಿಯು ಸದರಿ ಆರೋಪಿಗಳನ್ನು ಕೇಂದ್ರ ಕಾರಾಗೃಹದಲ್ಲಿ ನೋಡಿದ ವ್ಯಕ್ತಿಗಳು ಆಗಿರುವುದಿಲ್ಲ ಎಂದು ನುಡಿಯುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಭಾಗಶಃ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸ ಸ ಅ ರವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು)**

**ಪಾಟೀಸವಾಲುಃ ಮಾನ್ಯ ಸ ಸ ಅ ರವರಿಂದ ಃ**

ನಾನು ಜಿಲ್ಲಾ ಕೇಂದ್ರ ಕಾರಾಗೃಹದಲ್ಲಿ ಆರೋಪಿತರನ್ನು ನೋಡಿ ಗುರುತಿಸಿರುತ್ತೇನೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿತರು ನನ್ನ ಬಳಿ ಸರ ಕಸಿದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ನ್ಯಾಯಾಲಯದ ಮುಂದಿರುವ ಆರೋಪಿತರೇ ನಾನು ಕೇಂದ್ರ ಕಾರಾಗೃಹದಲ್ಲಿ ಗುರುತಿಸಿದ ಆರೋಪಿಗಳು ಮತ್ತು ನನ್ನಿಂದ ಸರವನ್ನು ಕಳ್ಳತನ ಮಾಡಿದ ಆರೋಪಿಗಳಾಗಿರುತ್ತಾರೆ ಎಂದರೆ ಸರಿಯಲ್ಲ.

<u>**ಪಾಟೀಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಮಾಡಲು ಕಾಲವಕಾಶವನ್ನು ಕೋರಿರುತ್ತಾರೆ, ಯಾವುದೇ ಸಕಾರಣವನ್ನು ನೀಡಿರುವುದಿಲ್ಲ. ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**</u>

<u>**ಮರು ವಿಚಾರಣೆ : ಇಲ್ಲ**</u>

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಎ ಒ

Sd/-

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.